ಮಾಧ್ಯಮಿಕ ಶಾಲೆಗಳ ಪರಿಸ್ಥಿತಿ ಕುರಿತು

762 (164) ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬಾರಾವ್ (ಜಮಖಂಡಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಾಗಲಕೋಟೆ ಜಿಲ್ಲೆಯಲ್ಲಿರುವ ಒಟ್ಟು ಸರ್ಕಾರಿ ಪ್ರೌಢಶಾಲೆಗಳೆಷ್ಟು; ಈ ಶಾಲೆಗಳಲ್ಲಿ ಗುಮಾಸ್ತರು ಹಾಗೂ ನೌಕರರು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಈ ಶಾಲೆಗಳಿಗೆ ಖಾಲಿಯಿರುವ ಹುದ್ದೆಗಳನ್ನು ಎಂದು ಭರ್ತಿ ಮಾಡಲಾಗುವುದು;

ಇ) ಆಂಗ್ಲಭಾಷೆ ಕಲಿಸುವ ಸೂಕ್ತ ಶಿಕ್ಷಕರು ಇಲ್ಲದೇ ಇರುವ ಪ್ರೌಢಶಾಲೆಗಳೆಷ್ಟು;

ಈ) ಆಂಗ್ಲಭಾಷೆಯಲ್ಲಿ ವ್ಯಾಸಂಗ ಮಾಡಿರುವ ಪದವೀಧರರನ್ನು ಮಾತ್ರ ಆಂಗ್ಲಭಾಷೆಯನ್ನು ಕಲಿಸಲು ನಿಯೋಜಿಸಬಹುದಲ್ಲವೆ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಬಾಗಲಕೋಟೆ ಜಿಲ್ಲೆಯಲ್ಲಿರುವ ಒಟ್ಟು ಸರ್ಕಾರಿ ಪ್ರೌಢಶಾಲೆಗಳ ಸಂಖ್ಯೆ 139.

ಹೌದು.

ಆ) ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ಒಟ್ಟು 2581 ಹುದ್ದೆಗಳನ್ನು ಭರ್ತಿ ಮಾಡಲು (ಬಾಗಲಕೋಟೆ ಜಿಲ್ಲೆ 96 ಹುದ್ದೆಗಳು) ಆಯ್ಕೆಯಾದ ಶಿಕ್ಷಕರ ಅಂತಿಮ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ದಿನಾಂಕ: 26-04-2010 ರಿಂದ 30-04-2010 ರವರೆಗೆ ಕೌನ್ಸಿಲಿಂಗ್ ಮೂಲಕ ನೇಮಕಾತಿ ಆದೇಶಗಳನ್ನು ಜಾರಿಮಾಡಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

21 ಗುಮಾಸ್ತರ ಹುದ್ದೆಗಳನ್ನು ಅನುಕಂಪದ ಆಧಾರದ ಮೇಲೆ ಮತ್ತು 'ಡಿ' ಗ್ರೂಪ್ ನೌಕಕರಿಗೆ ಬಡ್ತಿ ನೀಡಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ಇ) 2007–08ನೇ ಸಾಲಿನಲ್ಲಿ ಮಂಜೂರಾದ 66 ನೂತನ ಸರ್ಕಾರಿ ಪ್ರೌಢಶಾಲೆಗಳಲ್ಲಿ ಆಂಗ್ಲಭಾಷಾ ಶಿಕ್ಷಕರ ಹುದ್ದೆ ಮಂಜೂರಾಗಬೇಕಾಗಿದೆ.

ಈ) ಹೌದು. ಈ ಬಗ್ಗೆ ಈಗಾಗಲೇ ಆಂಗ್ಲಭಾಷಾ ಶಿಕ್ಷಕರನ್ನು ಪ್ರತ್ಯೇಕವಾಗಿ ನೇಮಕ ಮಾಡಿಕೊಳ್ಳಲಾಗುತ್ತಿದೆ.

ಸರ್ಕಾರಿ ಕಾಲೇಜುಗಳು ಹಾಗೂ ಶಿಕ್ಷಕರ ಕೊರತೆ ಬಗ್ಗೆ

763 (327) ಶ್ರೀ ಕುಮಾರಸ್ವಾಮಿ ಕೆ.ಜಿ (ಶಿವಮೊಗ್ಗ ಗ್ರಾಮಾಂತರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ಜಿಲ್ಲೆಯಲ್ಲಿ ಎಷ್ಟು ಪ್ರಾಥಮಿಕ/ಮಾಧ್ಯಮಿಕ ಮತ್ತು ಪ್ರೌಢಶಾಲೆಗಳಿವೆ (ಗ್ರಾಮವಾರು ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು);

ಆ) ಈ ಎಲ್ಲಾ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಸಂಪೂರ್ಣವಾಗಿ ಒದಗಿಸಲಾಗಿದೆಯೇ (ಕುಡಿಯುವ ನೀರು, ಶೌಚಾಲಯ, ಕೊಠಡಿಗಳ ವಿವರ ನೀಡುವುದು);

ಇ) ಜಿಲ್ಲೆಯಲ್ಲಿ ಹೊಸದಾಗಿ ಪ್ರೌಢಶಾಲೆಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ (ವಿವರ ಒದಗಿಸುವುದು);

ಈ) ವಿದ್ಯಾರ್ಥಿಗಳ ಅನುಪಾತಕ್ಕೆ ತಕ್ಕಂತೆ ಶಿಕ್ಷಕರನ್ನು ನೀಡಲಾಗಿದೆಯೇ;

ಉ) ಜಿಲ್ಲೆಯಲ್ಲಿ ಕೊರತೆ ಇರುವ ಶಿಕ್ಷಕರ ಸಂಖ್ಯೆ ಎಷ್ಟು ಪ್ರತಿ ಯೊಂದು ಶಾಲೆಯಲ್ಲಿ ಯಾವ್ಯಾವ ವಿಷಯಗಳ ಶೀಕ್ಷಕರ ಕೊರತೆ ಇದೆ (ವಿವರ ನೀಡುವುದು);

ಊ) ಕಳೆದ 3 ವರ್ಷಗಳಲ್ಲಿ ಶಿವಮೊಗ್ಗ ವಿಧಾನಸಭಾ ಕ್ಷೇತ್ರದಲ್ಲಿ ಶಿಕ್ಷಣ ಅಭಿವೃದ್ಧಿಗಾಗಿ ಕೈಗೊಂಡಿರುವ ಕಾರ್ಯಕ್ರಮಗಳ (ಸೈಕಲ್, ನೋಟ್ ಪುಸ್ತಕ, ಬ್ಯಾಗ್, ಸಮವಸ್ತ್ರ ವಿವರಗಳನ್ನು ನೀಡುವುದು);

ಋ) ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾರ್ಥಿಗಳ ಕೊರತೆ ಎದುರಿಸುತ್ತಿ ರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?